ದಿನಾಂಕ 14.03.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು 4 ಮತ್ತು 5ನೇ ಪ್ರತಿವಾದಿಗಳ ಪರ ವಕೀಲರಿಂದಃ-

4. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿದ್ದೇನೆ. ಊರಿನಲ್ಲಿ ನಾನು ಯಾವುದೇ ಪಂಚಾಯಿತಿಯನ್ನು ಮಾಡಿರುವುದಿಲ್ಲ. ನನ್ನ ತಾಯಿಯ ಹೆಸರು ಚಿಕ್ಕತಾಯಮ್ಮ. ನನ್ನ ತಾಯಿಗೆ ಮತ್ತೊಂದು ಹೆಸರಿತ್ತು ಎನ್ನುವುದು ಸರಿಯಲ್ಲ. ನನ್ನ ತಾಯಿಗೆ ಮರಿಕೆಂಪಮ್ಮ ಎಂಬ ಮತ್ತೊಂದು ಹೆಸರಿತ್ತು ಎನ್ನುವ ಬಗ್ಗೆ ನನಗೆ ಗೊತ್ತಿಲ್ಲ. ದಿನಾಂಕ 09.11.2021ರ ದಾನಪತ್ರದಲ್ಲಿ ನನ್ನ ತಾಯಿಯ ಹೆಸರು ಚಿಕ್ಕತಾಯಮ್ಮ ಉರುಫ್ ಮರಿಕೆಂಪಮ್ಮ ಎಂದು ಇದೆ ಎಂದು ಕಾಣಿಸಲಾಗಿದೆ ಎನ್ನುವ ಬಗ್ಗೆ ನನಗೆ ಗೊತ್ತಿಲ್ಲ. ಸದರಿ ಸ್ವತ್ತನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎನ್ನುವುದು ನನಗೆ ಗೊತ್ತಿಲ್ಲ. ನನ್ನ ತಾಯಿಯ ಹೆಸರಿನಲ್ಲಿರುವ ಸ್ವತ್ತುಗಳನ್ನು ಈ ದಾವೆಯಲ್ಲಿ ಸೇರಿಸಿಲ್ಲ. ನಾನು 1ನೇ ಪ್ರತಿವಾದಿಯಾದ ನನ್ನ ತಮ್ಮನೊಂದಿಗೆ ಶರೀಕಾಗಿ ನನ್ನ ಅಕ್ಕ ತಂಗಿಯರ ಮೇಲಿನ ದ್ವೇಷದಿಂದ ಈ ದಾವೆಯನ್ನು ದಾಖಲಿಸಿದ್ದೇನೆ ಎನ್ನುವುದು ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.